**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ಶೋರಾಪುರ.**

**ಸಿ.ಸಿ. ನಂ.1531/2023**

| | | |
|---|---|---|
| ಸಾಕ್ಷಿದಾರರ ಹೆಸರು | ಃ ಬಸವರಾಜ | ಚಾಸಾ ಃ 02 |
| ತಂದೆ ಹೆಸರು | ಃ ಮಾನಪ್ಪ | ಪ್ರಾಸಾ ಃ 03 |
| ವಯಸ್ಸು | ಃ 38 ವರ್ಷ | |
| ವೃತ್ತಿ | ಃ ಒಕ್ಕಲುತನ | |
| ವಾಸ ಸ್ಥಳ | ಃ ಮಂಗಳೂರು | |

**ಸಾಕ್ಷಿಗೆ ಇಂದು ದಿನಾಂಕಃ 22.04.2026 ರಂದು ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ.ಸ.ಅ.ರವರಿಂದಃ**

ಚಾಸಾ-1, 3 ರಿಂದ 5 ರವರ ಪರಿಚಯ ಇದೆ. ಆರೋಪಿತರ ಪರಿಚಯ ಇದೆ. ಈಗ ನಾನು ನೋಡುತ್ತಿರುವ ಪಂಚನಾಮೆ ಮೇಲೆ ಪೋಲೀಸರು 3 ವರ್ಷಗಳ ಹಿಂದೆ ಘಟನಾ ಸ್ಥಳದಲ್ಲಿ ಪಂಚನಾಮೆ ಮಾಡುವ ಕಾಲಕ್ಕೆ ನನ್ನ ಹೆಬ್ಬೆಟ್ಟಿನ ಗುರುತನ್ನು ತೆಗೆದುಕೊಂಡಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿರುತ್ತದೆ. ಸದರಿ ಪಂಚನಾಮೆಯ ಕಾಲಕ್ಕೆ ನನ್ನ ಜೊತೆ ದೇವಪ್ಪ ಮತ್ತು ಪೋಲೀಸರು ಬಂದಿದ್ದರು. ಸಾಕ್ಷಿ ಎಂದು ನನ್ನದು ಸಹಿ ಪಡೆದಿರುತ್ತಾರೆ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಸ.ಸ.ಅ ರವರ ವಿನಂತಿ ಮೇರೆಗೆ ಪರಿಗಣಿಸಿ ಪಾಟೀ ಸವಾಲಿಗೆ ಅವಕಾಶ ನೀಡಲಾಯಿತು.)**

**ಪಾಟೀ ಸವಾಲು ಃ ಅಭಿಯೋಜನೆ ಪರ ಸ.ಸ.ರವರಿಂದಃ**

ದಿನಾಂಕ 21-06-2023 ರಂದು ಬೆಳಿಗ್ಗೆ 9 ರಿಂದ 10 ಗಂಟೆಯವರೆಗೆ ಪೋಲೀಸರು ಘಟನಾ ಸ್ಥಳದಲ್ಲಿ ಪಂಚನಾಮೆ ಮಾಡಿ ನನ್ನ ಸಹಿ ಪಡೆದಿರುತ್ತಾರೆ ಎಂರದೆ ಸರಿ. ಸದರಿ ಗುನ್ನಾ ಸ್ಥಳವನ್ನು ಚಾಸಾ-1 ರವರು ತೋರಿಸಿರುತ್ತಾರೆ. ಸದರಿ ಪಂಚನಾಮೆ ಕಾಲೆಕ್ಕ ಒಂದು ಬಡಿಗೆ ಮತ್ತು ಒಂದು ಚಪ್ಪಲಿಯನ್ನು

ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಕಾಲಕ್ಕೆ ಒಂದು ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿ. ಸದರಿ ಛಾಯಾ ಚಿತ್ರದಲ್ಲಿ ನಾನು ಕಂಡುಬರುತ್ತೇನೆ ಎಂದರೆ ಸರಿ.

**ಪಾಟೀ ಸವಾಲು ಃ ಆರೋಪಿತರ ಪರ ಶ್ರೀ ಎಂ.ಎಂ.ಹೆಚ್ ವಕೀಲರಿಂದಃ**

ಪೋಲೀಸರು ಸಹಿ ಮಾಡು ಎಂದು ಹೇಳಿ ಭಯಪಡಿಸಿದ್ದಕ್ಕೆ ನಾನು ಪಂಚನಾಮೆ ಮೇಲೆ ಸಹಿ ಮಾಡಿದ್ದೇನೆ ಎಂದರೆ ಸರಿ.

**ಮರು ವಿಚಾರಣೆ ಃ** ಇಲ್ಲ.

(ಸಾಕ್ಷಿದಾರರ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಪ್ರಕಾರ ಬೆರಳಚ್ಚು ಮಾಡಲಾಯಿತು)

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.